ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ನಿಗಮ, ಮಂಡಳಿ, ಪ್ರಾಧಿಕಾರಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುವ ಕುರಿತು

ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು):-

536(614) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿಗಾಗಿ ರಚನೆಯಾಗಿರುವ ನಿಗಮ, ಪ್ರಾಧಿಕಾರಗಳ ಸಂಖ್ಯೆ ಎಷ್ಟು; (ಸಂಪೂರ್ಣ ವಿವರ ಒದಗಿಸುವುದು)

(ಆ) ಈ ನಿಗಮಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ; ಅಧ್ಯಕ್ಷರ ನೇಮಕ ಮಾಡಲಾಗಿದೆಯೇ; (ವಿವರ ಒದಗಿಸುವುದು)

(ಇ) ಕಳೆದ 3 ವರ್ಷಗಳಲ್ಲಿ ಈ ನಿಗಮಗಳಿಗೆ ಒದಗಿಸಲಾದ ಅನುದಾನ ಎಷ್ಟು; ಬಳಕೆಯಾದ ಅನುದಾನ ಎಷ್ಟು; ಒದಗಿಸಲಾದ ಅನುದಾನದಲ್ಲಿ ಕೈಗೊಂಡ ಕಾರ್ಯಕ್ರಮಗಳು, ಯೋಜನೆಗಳು ಯಾವುವು ; ಈ ನಿಗಮಗಳಿಗಿರುವ ಸಾಲದ ಮೊತ್ತ ಎಷ್ಟು; (ವರ್ಷವಾರು ಪ್ರತ್ಯೇಕ ಮಾಹಿತಿ ಒದಗಿಸುವುದು)

(ಈ) ನಿಗಮಗಳ ಸ್ಥಾಪನೆಯ ಉದ್ದೇಶಗಳೇನು; ಸದರಿ ಉದ್ದೇಶಗಳು ಈಡೇರುತ್ತಿದೆಯೇ ; (ಸದರಿ ನಿಗಮ ಮಂಡಳಿಗಳ ಬದಲಿಗೆ ಇಲಾಖೆಯಿಂದಲೇ ಸಮಾಜದ ಎಲ್ಲಾ ವರ್ಗದ ಜನರಿಗೆ ಆರ್ಥಿಕ ಚೇತನಕ್ಕೆ, ವಿದ್ಯೆಗೆ, ಸ್ವಯಂ ಉದ್ಯೋಗಕ್ಕೆ ಬೇಕಾದ ಯೋಜನೆಗಳನ್ನು ರೂಪಿಸುವ ಯೋಚನೆ ಸರ್ಕಾರಕ್ಕಿದೆಯೇ ;

(ಉ) ವಿವಿಧ ಸಮುದಾಯಗಳ ಅಭಿವೃದ್ಧಿ ದೃಷ್ಟಿಯಿಂದ ಪ್ರಾರಂಭಿಸಲಾಗುವ ನಿಗಮ, ಮಂಡಳಿ, ಪ್ರಾಧಿಕಾರಗಳು, ವಿಫಲವಾಗುತ್ತಿರುವುದು ಮತ್ತು ಸರ್ಕಾರಕ್ಕೆ ಆರ್ಥಿಕ ಹೊರೆಯಾಗಿ ಪರಿಣಮಿಸುತ್ತಿರುವುದನ್ನು ಸರ್ಕಾರವು ಗಂಭೀರವಾಗಿ ಗಮನಿಸಿದೆಯೇ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳು ಏನು ; (ಸಂಪೂರ್ಣ ವಿವರ ಒದಗಿಸುವುದು)

(ಊ) ವಿವಿಧ ಸಮುದಾಯಗಳ ಅಭಿವೃದ್ಧಿಗೆ ಪ್ರತ್ಯೇಕ ನಿಗಮ, ಮಂಡಳಿ, ಪ್ರಾಧಿಕಾರ ರಚನೆಯಾಗುತ್ತಿರುವುದು ಸಮಾಜ ಕಲ್ಯಾಣ ಇಲಾಖೆಯ ಅಪ್ರಸ್ತುತತೆಗೆ ಕಾರಣವಾಗುವುದಿಲ್ಲವೇ; ಹಾಗಿದ್ದಲ್ಲಿ, ಸರ್ಕಾರದ ಚಿಂತನೆ ಏನು ? (ವಿವರ ಒದಗಿಸುವುದು)